1998-99ನೇ ಸಾಲಿನಲ್ಲಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳು.

804(1101) ಶ್ರೀ ಎನ್.ಎ. ರವೀಂದ್ರನಾಥ್ (ಮಾಯಕೊಂಡ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99ನೇ ಸಾಲಿನಲ್ಲಿ ಮಂಜೂರು ಮಾಡಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಹಾಗೂ ಕ್ಷೇತ್ರವಾರು ಮಾಹಿತಿ ನೀಡುವುದು)?

ಆ) ಆರೋಗ್ಯ ಕೇಂದ್ರಗಳನ್ನು ಮಂಜೂರಾತಿ ಮಾಡಲು ಅನುಸರಿಸುವ ಮಾನದಂಡವೇನು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) 1998-99ನೇ ಸಾಲಿನಲ್ಲಿ ಪ್ರಾಥಮಿಕ ಕೇಂದ್ರಗಳನ್ನು ಇನ್ನು ಮಂಜೂರಾಗಿರುವುದಿಲ್ಲ.

ಆ) ಭಾರತ ಸರ್ಕಾರದ ಮಾರ್ಗ ಸೂಚಿಯ ಪ್ರಕಾರ ಬಯಲು ಸೀಮೆ ಪ್ರದೇಶದಲ್ಲಿ ಪ್ರತಿ 30,000 ಜನಸಂಖ್ಯೆಗೆ ಒಂದರಂತೆ ಅಧಿವಾಸಿ ಪ್ರದೇಶಗಳಲ್ಲಿ 20,000 ಜನಸಂಖ್ಯೆಗೆ ಒಂದರಂತೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗುತ್ತಿದೆ.

1998-99ನೇ ಸಾಲಿನಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಬಳ್ಳಾರಿ ಹಾಗೂ ದಾವಣಗೆರೆ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಹಣ.

805(1100) ಶ್ರೀ ಎನ್.ಎ. ರವೀಂದ್ರನಾಥ್ (ಮಾಯಾಕೊಂಡ) :— ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1998-99ನೇ ಸಾಲಿನಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಬಳ್ಳಾರಿ ಜಿಲ್ಲೆಗೆ ಹಾಗೂ ದಾವಣಗೆರೆ ಜಿಲ್ಲೆಗಳಿಗೆ ಬಿಡುಗಡೆ ಮಾಡಿದ ಒಟ್ಟು ಮೊಬಲಗು ಹಾಗೂ ಮಾಡಿದ ವೆಚ್ಚವೆಷ್ಟು? (ವಿಧಾನಸಭಾ ಕ್ಷೇತ್ರವಾರು ಹಾಗೂ ಈ ಇಲಾಖೆಯಲ್ಲಿ ಬರುವ ಎಲ್ಲಾ ಯೋಜನೆಯ ಪ್ರತ್ಯೇಕ ವಿವರಗಳನ್ನು ನೀಡುವುದು)

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು):—

ಅ) ವಿವರಗಳನ್ನು ಅನುಬಂಧ 1 ರಲ್ಲಿ ನೀಡಲಾಗಿದೆ.